ದಿನಾಂಕ: 21.04.2022 ರಂದು ಬೆಳಗ್ಗೆ 11.00 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ. 101 ರಲ್ಲಿ ಶ್ರೀ ಸತ್ಯನಾರಾಯಣರಾಜ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಸತ್ಯನಾರಾಯಣ ರಾಜ್, ನೋಡಲ್ ಅಧಿಕಾರಿಗಳು ಹಾಗೂ ಸದಸ್ಯರು
2. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀಮತಿ ರಾಜೇಶ್ವರಿ, ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀಮತಿ ರೂಪಶ್ರೀ, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ವಿನಾಯಕ.ಎಂ. ಮಾರ್ಷಲ್
6. ಶ್ರೀಮತಿ ಸ್ಮಿತಾ.ಆರ್. ಕಂದಾಯ ನಿರೀಕ್ಷಕರು
7. ಶ್ರೀ ಕೆ. ಉಮಾಶಂಕರ್, ಸದಸ್ಯರು
8. ಶ್ರೀ ಎಸ್. ಶ್ರೀನಿವಾಸ್, ಸೂಪರ್ ವೈಸರ್
9. ಶ್ರೀ ವೆಂಕಟೇಶ್
10. ಶ್ರೀ ವಿ.ಎಸ್.ಐ. ಜೀವ್, ಎಸ್.ಬಿ.ಐ. ಸೆಕ್ಯೂರಿಟಿ

ದಿನಾಂಕ: 06.04.2022 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 21.04.2022ರ ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ **ಎಸ್.ಬಿ.ಐ. ಆಫೀಸರ್ಸ್ ಸಮುಧಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ**, ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ಕಂದಾಯ ಪರಿವೀಕ್ಷರಾದ ಶ್ರೀಮತಿ ಸ್ಮಿತಾ ರವರು ನಮ್ಮ ವಾರ್ಡ್ ಕೊಠಡಿಯಲ್ಲಿ ಶೌಚಲಯ ಇರುವುದಿಲ್ಲ ಮತ್ತು ನೀರಿನ ಸರಬರಾಜು ಸಹ ಇರುವುದಿಲ್ಲ. ಅದಕ್ಕೆ ಪರಿಹಾರವಾಗಿ ಶೌಚಾಲಯ ಮತ್ತು ನೀರು ಸರಬರಾಜು ಮಾಡಿಕೊಡಲು ಚರ್ಚಿಸಿದಂತೆ ವೇಳೆಯಲ್ಲಿ ಪ್ರಸ್ತುತ ಸಾಲಿನಲ್ಲಿ ಸುಮಾರು ಶೇ.80% ರಷ್ಟು ನಿರೀಕ್ಷಿತ ಗುರಿಯನ್ನು ಮೀರಿ ಕಂದಾಯ ಸಂಗ್ರಹಣೆ ಮಾಡಿರುತ್ತೇವೆ ಎಂದು ಸಭೆಯಲ್ಲಿ ತಿಳಿಸುತ್ತಾ, ಇನ್ನುಳಿದಂತಹ ಕರಾ ವಸೂಲಿ ಸಂಗ್ರಹವನ್ನು ತುರ್ತಾಗಿ ಕ್ರಮ ವಹಿಸುತ್ತೇವೆ ಎಂದು ಸಭೆಗೆ ತಿಳಿಸಿರುತ್ತಾರೆ.

2 ಹಿರಿಯ ಆರೋಗ್ಯಾಧಿಕಾರಿಗಳು ಕೋವಿಡ್-19ರ ಬಗ್ಗೆ ಸಭೆಗೆ ಶ್ರೀಮತಿ ರಾಜೇಶ್ವರಿ, ಹಿ.ಆ.ಪ. ರವರು ಸದರಿ ಸಾಂಕ್ರಾಮಿಕ ರೋಗದ ಬಗ್ಗೆ ನಮ್ಮಲ್ಲಿ ಯಾವುದೇ ತರಹದ ಲಸಿಕೆಯಾಗಲಿ ಅಥವಾ ಪರಿಕ್ಷಿಸುವುದಾಗಲಿ ಯಾವುದಕ್ಕೂ ತೊಂದರೆ ಇಲ್ಲ ಒಂದು ವೇಳೆ ಏನಾದರೂ ಸಾಂಕ್ರಾಮಿಕ ರೋಗ ಕಂಡು ಬಂದಲ್ಲಿ ನಮ್ಮ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮಾಹಿತಿ ನೀಡುವಂತೆ ಸಭೆಯಲ್ಲಿ ತಿಳಿಸುತ್ತಾ ಹಾಗೂ ಎಲ್ಲಾ ಶಾಲೆಗಳಿಗೆ ಕೋವಿಡ್ ಸಾಂಕ್ರಾಮಿಕ ರೋಗದ ಔಷಧಿಗಳನ್ನು ಸರಬರಾಜು ಮಾಡುವ ಕೆಲಸ ಪ್ರಗತಿಯಲ್ಲಿದೆ.

**ಪು.ತಿ.ನೋ.**

Scanned by CamScanner

3. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಬಿದ್ದಿರುವುದರಿಂದ ತುರ್ತಾಗಿ ಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಹಾಯಕ ಅಭಿಯಂತರರು, ಬಿ.ಬಿ.ಎಂ.ಪಿ ರವರು ರಸ್ತೆಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳುವುದಾಗಿ ಹಾಗೂ ನೋಡಲ್ ಅಧಿಕಾರಿಗಳ ಸಮ್ಮುಖದಲ್ಲಿ ಚರ್ಚಿಸಿದಂತೆ, ಮಾನ್ಯ ಕಾರ್ಯಪಾಲಕ ಅಭಿಯಂತರರು [ರಾಜಾಜಿನಗರ] ರವರು ಈಗಾಗಲೇ ಗುಂಡಿ ಮುಚ್ಚಲು ಕೆಲಸದ ಆದೇಶ ನೀಡಲಾಗಿದ್ದು, ಪ್ರಸ್ತುತ ದಿನಗಳಲ್ಲಿ ಮಳೆ ಬೀಳುವುದರಿಂದ ಡಾಂಬರೀಕರಣ ಮೂಲಕ ಗುಂಡಿ ಮುಚ್ಚಲು ಸ್ವಲ್ಪ ವಿಳಂಭವಾಗಿರುತ್ತದೆ, ಮುಂದಿನ ದಿನಗಳಲ್ಲಿ ಗುಂಡು ಮುಚ್ಚಲು ಕ್ರಮ ವಹಿಸಲಾಗುವುದು ಎಂದು ಸಭೆಗೆ ತಿಳಿಸಿರುತ್ತಾರೆ.

4. ಸಭೆಯಲ್ಲಿ ಮಾನ್ಯ ಸದಸ್ಯರ ಕೋರಿಕೆಯಂತೆ ಸಾರ್ವಜನಿಕ ಪಾದಚಾರಿ ಮಾರ್ಗಗಳಲ್ಲಿ ಬೇರೆ ಬೇರೆ ಪ್ರದೇಶಗಳಿಂದ ಬಂದು ಹಾಗೂ ಸಂಚರಿಸುವ ಕಾರುಗಳು ಮತ್ತು ದ್ವಿಚಕ್ರ ವಾಹನಗಳನ್ನು ಪಾದಚಾರಿ ಮಾರ್ಗದ ಮೇಲೆ ನಿಲ್ಲಿಸುವುದರಿಂದ ಸಾರ್ವಜನಿಕರಿಗೆ ವಯೋ ವೃದ್ಧ ವ್ಯಕ್ತಿಗಳಿಗೆ ಪಾದಚಾರಿ ಮಾರ್ಗದಲ್ಲಿ ಸಂಚರಿಸಲು ಬಹಳ ತೊಂದರೆಯಾಗುತ್ತದೆ ಎಂದು ಸಭೆಯಲ್ಲಿ ಚರ್ಚಿಸಿದ ಪ್ರಕಾರ, ಸದರಿ ವ್ಯವಸ್ಥೆಯನ್ನು ಸರಿಪಡಿಸಲು ಸಂಚಾರಿ ಪೋಲಿಸ್ ಠಾಣೆಗೆ ದೂರವಾಣಿ ಮುಖಾಂತರ ಸಂಬಂಧಪಟ್ಟ ನೌಕರರಿಗೆ ತಿಳಿಸಿದಾಗ ಸ್ವಲ್ಪ ಕಾಲವಕಾಶ ನೀಡಿದರೆ. ಸದರಿ ವ್ಯವಸ್ಥೆಯನ್ನು ಬದಲಿಸಿ, ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸಿಕೊಡುತ್ತೇವೆ ಎಂದು ತಿಳಿಸಿರುತ್ತಾರೆ. ಕಾರ್ಯದರ್ಶಿಯಾದ ನಾನು ಸದರಿ ಮಾಹಿತಿಯನ್ನು ಮುಂದಿನ ದಿನಗಳಲ್ಲಿ ತುರ್ತಾಗಿ ಪರಿಹರಿಸಲು ಮನವಿ ಮಾಡಿರುತ್ತೇನೆ.

5. ಸದರಿ ವಾರ್ಡ್ ಪ್ರದೇಶದಲ್ಲಿ ಕೆಲವು ಒಣಗಿದ ಮರಗಳನ್ನು ಮತ್ತು ಕೆಲವು ಕೊಂಬೆಗಳನ್ನು ತುರ್ತಾಗಿ ಕಟಾಯಿಸುವಂತೆ ತಿಳಿಸಿರುವ ಹಿನ್ನಲೆಯಲ್ಲಿ ಸಂಬಂಧಪಟ್ಟ ಅರಣ್ಯಾಧಿಕಾರಿಗಳ ಗಮನಕ್ಕೆ ತಿಳಿಸಿ ಮುಂದಿನ ದಿನಗಳಲ್ಲಿ ಉದ್ಭವಿಸಬಹುದಾದ ಅವಘಡಗಳನ್ನು ತಪ್ಪಿಸುವಂತೆ ಮನವಿ ಮಾಡಿರುತ್ತೇನೆ.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

22/4/22

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 101

Scanned by CamScanner